## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಿಂದುಳಿದ ವರ್ಗಗಳ ಜನಾಂಗದ ಸ್ವಯಂ ಸೇವಾ ಸಂಘ/ಸಂಸ್ಥೆಗಳು ನಿರ್ವಹಣೆ ಮಾಡುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಒಂದು ಬಾರಿಗೆ ನಿರ್ವಹಣಾ ವೆಚ್ಚ ನೀಡುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 10 ಬಿಎಂಎಸ್ 2014, ದಿನಾಂಕ:22.05.2014.
2. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 10 ಬಿಎಂಎಸ್ 2014, ದಿ:22.05.2014.
3. ಮಾನ್ಯ ಮುಖ್ಯಮಂತ್ರಿಗಳ ದಿನಾಂಕ:18.03.2016 ರಂದು ಮಂಡಿಸಿದ ಆಯವ್ಯಯ ಭಾಷಣದ ಕಂಡಿಕೆ:190.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಸಂಖ್ಯೆ:ಹಿಂವಕಇ/ಸ-6/ಸಿಆರ್-20/2016-17, ದಿನಾಂಕ:06.05.2016

******

ಪ್ರಸ್ತಾವನೆ:-

ಮೇಲೆ ಓದಲಾದ (1)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಜನಾಂಗದ ಸಂಘ-ಸಂಸ್ಥೆಗಳು ನಡೆಸುವ ಅನುದಾನ ರಹಿತ ಖಾಸಗಿ ವಿದ್ಯಾರ್ಥಿನಿಲಯಗಳ ನಿರ್ವಹಣೆ ವೆಚ್ಚ ಒಂದು ಬಾರಿಗೆ ತಲಾ ರೂ.2.00 ಲಕ್ಷದಂತೆ 11 ಸಂಸ್ಥೆಗಳಿಗೆ ಸಹಾಯಧನವನ್ನು ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ಮಂಜೂರು ಮಾಡಿದೆ. ಈ ಮೇಲಿನಂತೆ ಬಿಡುಗಡೆಯಾದ ಅನುದಾನವನ್ನು ವಿದ್ಯಾರ್ಥಿನಿಲಯದ ನಿರ್ವಹಣೆಗೆ ಅಗತ್ಯವಾದ ಪಾತ್ರೆ, ಪೀಠೋಪಕರಣಗಳ ಪೂರೈಕೆ, ಶೌಚಾಲಯ ವ್ಯವಸ್ಥೆ ಇತ್ಯಾದಿಗಳನ್ನು ಮಾಡಲು ಉಪಯೋಗಿಸಬೇಕೆಂದು ತಿಳಿಸಲಾಗಿದೆ.

ಮೇಲೆ ಓದಲಾದ(2)ರಲ್ಲಿ ಹಿಂದುಳಿದ ವರ್ಗಗಳ ಜನಾಂಗದ ಸಂಘ-ಸಂಸ್ಥೆಗಳು ನಡೆಸುವ ಖಾಸಗಿ ವಿದ್ಯಾರ್ಥಿನಿಲಯಗಳ ನಿರ್ವಹಣಾ ವೆಚ್ಚಕ್ಕಾಗಿ ಗರಿಷ್ಠ ರೂ.5.00 ಲಕ್ಷಗಳವರೆಗೆ ಅನುದಾನ ಮಂಜೂರು ಮಾಡಲು ಸರ್ಕಾರದ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (3)ರಲ್ಲಿ ದಿನಾಂಕ:18.03.2016 ರಂದು ಮಾನ್ಯ ಮುಖ್ಯಮಂತ್ರಿಗಳು ಮಂಡಿಸಿದ ಆಯವ್ಯಯ ಭಾಷಣದ ಕಂಡಿಕೆ 199 ರಲ್ಲಿ ಹಿಂದುಳಿದ ವರ್ಗಗಳ ಸ್ವಯಂ ಸೇವಾ ಸಂಸ್ಥೆಗಳು ನಿರ್ವಹಣೆ ಮಾಡುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ತಲಾ ರೂ.5.00 ಲಕ್ಷದಂತೆ ಒಂದು ಬಾರಿಯ ಅನುದಾನವನ್ನು ನೀಡಲು ರೂ.12.50 ಕೋಟಿಗಳನ್ನು ಅನುದಾನ ಒದಗಿಸಲಾಗುವುದು ಎಂದು ಘೋಷಣೆಯನ್ನು ಮಾಡಲಾಗಿದೆ.

ಮೇಲೆ ಓದಲಾದ (4)ರಲ್ಲಿ ಹಿಂದುಳಿದ ವರ್ಗಗಳ ಜನಾಂಗದ ಸ್ವಯಂ ಸೇವಾ ಸಂಘ/ಸಂಸ್ಥೆಗಳು ನಿರ್ವಹಣೆ ಮಾಡುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ತಲಾ ರೂ.5.00 ಲಕ್ಷಗಳಂತೆ ಒಂದು ಬಾರಿಗೆ ಅನುದಾನವನ್ನು ನೀಡುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು, ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

...2

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 398 ಬಿಎಂಎಸ್ 2016, ಬೆಂಗಳೂರು**
**ದಿನಾಂಕ: 26-10-2016**

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಹಿಂದುಳಿದ ಜನಾಂಗದ ಸ್ವಯಂ ಸೇವಾ ಸಂಘ/ಸಂಸ್ಥೆಗಳು ನಿರ್ವಹಣೆ ಮಾಡುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ತಲಾ ರೂ.5.00 ಲಕ್ಷಗಳಂತೆ ಒಂದು ಬಾರಿಗೆ ಅನುದಾನವನ್ನು ನೀಡುವ ಕುರಿತು ಮಾರ್ಗಸೂಚಿಗಳನ್ನು ಇದರ ಜೊತೆಗೆ ಲಗತ್ತಿಸಿರುವ ಅನುಬಂಧ-ಅ, ಅನುಬಂಧ-ಆ, ಮತ್ತು ಅನುಬಂಧ-ಇ ರಲ್ಲಿರುವಂತೆ ಹೊರಡಿಸಿ ಆದೇಶಿಸಿದೆ.

ಈ ಅನುದಾನವನ್ನು ಇಲಾಖೆಗೆ ಒದಗಿಸಿರುವ ಅನುದಾನದ ಮಿತಿಯೊಳಗೆ ಭರಿಸತಕ್ಕದ್ದು ಹಾಗೂ ಅಸ್ಥಿರ ಚಟುವಟಿಕೆಗಳನ್ನು ಒಳಗೊಂಡಿರುವ ಎಲ್ಲಾ ಸಂಘ ಸಂಸ್ಥೆಗಳ ಡಾಟಾ ಬೇಸನ್ನು ತಯಾರಿಸಿಕೊಂಡು, ಅವಶ್ಯಕತೆಗೆ ತಕ್ಕಷ್ಟು ಹಣವನ್ನು ಬಿಡುಗಡೆಗೊಳಿಸಿಕೊಳ್ಳುವ ಷರತ್ತಿಗೊಳಪಟ್ಟಿದೆ. ಈ ವೆಚ್ಚವನ್ನು ರಾಜ್ಯವಲಯ ಲೆಕ್ಕಶೀರ್ಷಿಕೆ:2225-03-001-0-05 ರಡಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಎಫ್‌ಡಿ 425 ವೆಚ್ಚ-3/2016, ದಿನಾಂಕ:18.06.2016ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 74 ಐಎಂಎಂ 2016, ದಿನಾಂಕ:22.09.2016ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

ಕರ್ನಾಟಕ ರಾಜ್ಯ ಪತ್ರದ ಸಂಕಲನಕಾರರು, ಬೆಂಗಳೂರು, ಇವರಿಗೆ ಕರ್ನಾಟಕ ರಾಜ್ಯಪತ್ರದ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಬೇಕೆಂದು ಕೋರಿದೆ. ಇದರ ಮುದ್ರಿತ ಬಿಡಿ ಪ್ರತಿಗಳನ್ನು ವಾಡಿಕೆಯ ಕ್ರಮದಂತೆ 10 ಪ್ರತಿಗಳನ್ನು ಪ್ರಾರೂಪಣಾ ಶಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಗೂ, 1000 ಪ್ರತಿಗಳನ್ನು ನೇರವಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಕಳುಹಿಸಿಕೊಡತಕ್ಕದ್ದು.

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ)/ಯೋಜನಾ ಇಲಾಖೆ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6. ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು.

} ಆಯುಕ್ತರು, ಹಿಂವಕ, ಇವರ ಮುಖಾಂತರ

ಪ್ರತಿ:-

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 398 ಬಿಎಂಎಸ್ 2016, ದಿನಾಂಕ: -10-2016ರ**
**ಅನುಬಂಧ-ಅ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

**ಹಿಂದುಳಿದ ವರ್ಗಗಳ ಜನಾಂಗದ ಸ್ವಯಂ ಸೇವಾ ಸಂಘ/ಸಂಸ್ಥೆಗಳು ನಿರ್ವಹಣೆ ಮಾಡುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ತಲಾ 5.00 ಲಕ್ಷ ರೂ ಗಳಂತೆ ಒಂದು ಬಾರಿಗೆ ಅನುದಾನವನ್ನು ನೀಡುವ ಬಗ್ಗೆ ಮಾರ್ಗಸೂಚಿಗಳು**

1. **ಅರ್ಹತೆ:**

(ಅ) ಈ ಕಾರ್ಯಕ್ರಮದಡಿ ಧನಸಹಾಯವನ್ನು ಪಡೆಯಲು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ, ಮತ್ತು 3ಬಿ ಗೆ ಸೇರಿದ ನೊಂದಾಯಿತ ಸಂಘ/ಸ್ವಯಂ ಸೇವಾ ಸಂಸ್ಥೆ/ಟ್ರಸ್ಟ್‌ಗಳು ಅರ್ಹರಿರುತ್ತವೆ.

(ಆ) ಸಂಸ್ಥೆಯು ವಿದ್ಯಾರ್ಥಿನಿಲಯವನ್ನು ಕನಿಷ್ಠ 5 ವರ್ಷಗಳಿಂದ ನಡೆಸುತ್ತಿರಬೇಕು.

(ಇ) ಈ ಕಾರ್ಯಕ್ರಮದಡಿ ಒಂದು ಬಾರಿಗೆ ರೂ.5.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡುವ ಅಥವಾ ಅವಶ್ಯಕತೆಗೆ ತಕ್ಕಷ್ಟು ಹಣವನ್ನು ಬಿಡುಗಡೆಗೊಳಿಸುವ ಷರತ್ತಿಗೊಳಪಟ್ಟಿದೆ.
(ಈ) ಈ ಕಾರ್ಯಕ್ರಮದಡಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅನುದಾನ ಪಡೆಯುತ್ತಿರುವ ಅನುದಾನಿತ ಖಾಸಗಿ ವಿದ್ಯಾರ್ಥಿ ನಿಲಯಗಳು ಹಾಗೂ ಹಿಂದುಳಿದ ವರ್ಗಗಳ ಸಂಘ-ಸಂಸ್ಥೆಗಳು ನಡೆಸುತ್ತಿರುವ ಅನುದಾನ ರಹಿತ ಖಾಸಗಿ ವಿದ್ಯಾರ್ಥಿ ನಿಲಯಗಳ ಕೂಡ ಒಂದು ಬಾರಿಗೆ ಅನುದಾನ ಪಡೆಯಲು ಅರ್ಹರಿರುತ್ತಾರೆ.

2. **ಸಹಾಯಧನ ಮಂಜೂರಾತಿಯ ಉದ್ದೇಶ:**

ಈ ಕಾರ್ಯಕ್ರಮದಡಿ ನೀಡಿದ ಧನಸಹಾಯವನ್ನು ಈ ಕೆಳಕಂಡ ಉದ್ದೇಶಗಳಿಗೆ, ಆದ್ಯತೆಯ ಮೇರೆಗೆ ಮಾತ್ರ ಬಳಸತಕ್ಕದ್ದು.

1) ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳಿಗೆ ಪಾತ್ರೆ, ತಟ್ಟೆ ಮತ್ತು ಲೋಟ ಖರೀದಿಗಾಗಿ
2) ನೀರಿನ ಸಂಗ್ರಹಣೆಯ ಟ್ಯಾಂಕ್ ನಿರ್ಮಾಣಕ್ಕಾಗಿ/ಖರೀದಿಗಾಗಿ
3) ನೀರಿನ ಶುದ್ಧೀಕರಣ ಉಪಕರಣ (Water Purifier) ಖರೀದಿಗಾಗಿ
4) ಗ್ರಂಥಾಲಯ ವ್ಯವಸ್ಥೆಗಾಗಿ
5) ಊಟದ ಟೇಬಲ್‌ಗಳ ಖರೀದಿಗಾಗಿ
6) ಸೋಲಾರ್ ವಾಟರ್ ಹೀಟರ್ ಖರೀದಿಗಾಗಿ
7) ಅಡುಗೆ ಅನಿಲ ಒಲೆ ಖರೀದಿಗಾಗಿ
8) ಸ್ಟೀಮ್ ಕುಕಿಂಗ್ ವ್ಯವಸ್ಥೆ ಮಾಡಲು
9) ಕಂಪ್ಯೂಟರ್‌ಗಳ ಖರೀದಿಗಾಗಿ
10) ಯು.ಪಿ.ಎಸ್. ಖರೀದಿಗಾಗಿ
11) ವಿದ್ಯಾರ್ಥಿಗಳಿಗೆ ಮಂಚ ಖರೀದಿಗಾಗಿ
12) ವಿದ್ಯಾರ್ಥಿನಿಲಯಗಳ ಕೊಠಡಿಗಳಲ್ಲಿ ಅಳವಡಿಸಲು ಫ್ಯಾನ್‌ಗಳ ಖರೀದಿಗಾಗಿ
13) ಟೇಬಲ್ ಮತ್ತು ಕುರ್ಚಿಗಳ ಖರೀದಿಗಾಗಿ
14) ಶೌಚಾಲಯಗಳ ನಿರ್ಮಾಣ

1. **ಸಹಾಯಧನ ಮಂಜೂರಾತಿಗಾಗಿ ನಿಬಂಧನೆಗಳು:**
   1. ಧನಸಹಾಯ ಪಡೆಯುವ ಸಂಸ್ಥೆಯು, ಕರ್ನಾಟಕ ಸಂಘಗಳ ನೊಂದಣಿ ಕಾಯ್ದೆ 1960 ಅಥವಾ ಟ್ರಸ್ಟ್ ಕಾಯ್ದೆಯನ್ವಯ/ನೊಂದಣಿ ನಿಯಮಗಳನ್ವಯ ನೊಂದಾಯಿತ ಸಂಸ್ಥೆಯಾಗಿರಬೇಕು. ಸಂಸ್ಥೆಯು ನೊಂದಣಿಯಾಗಿ ಕನಿಷ್ಠ 5 ವರ್ಷಗಳಾಗಿರಬೇಕು.
   2. ಟ್ರಸ್ಟ್‌ನ ಸದಸ್ಯರು ಬೇರೆ ಬೇರೆ ಕುಟುಂಬಗಳಿಗೆ ಸೇರಿದವರಾಗಿರಬೇಕು.(ದಾಖಲೆ ಪತ್ರ ಸಲ್ಲಿಸುವುದು)
   3. ಧನಸಹಾಯ ಬಯಸುವ ಸಂಘ/ಸ್ವಯಂ ಸೇವಾ ಸಂಸ್ಥೆಗಳು/ಟ್ರಸ್ಟ್‌ಗಳು, ಹಿಂದಿನ ಮೂರು ವರ್ಷಗಳ ಆಡಿಟ್ ವರದಿಗಳನ್ನು, ಚಾರ್ಟೆಡ್ ಅಕೌಂಟ್‌ರವರಿಂದ ಆಡಿಟ್ ಮಾಡಿಸಿ ಅರ್ಜಿಯೊಂದಿಗೆ ಸಲ್ಲಿಸಬೇಕು.
   4. ಧನಸಹಾಯವನ್ನು ಬಯಸುವ ಸಂಘ/ಸ್ವಯಂ ಸೇವಾ ಸಂಸ್ಥೆಗಳು/ಟ್ರಸ್ಟ್‌ಗಳು, ಸ್ವಂತ ವಿದ್ಯಾರ್ಥಿನಿಲಯ ಕಟ್ಟಡ ಹೊಂದಿರಬೇಕು.
   5. ಧನಸಹಾಯವನ್ನು ಪಡೆಯಲಿಚ್ಚಿಸುವ ಸಂಘ/ಸ್ವಯಂ ಸೇವಾ ಸಂಸ್ಥೆಗಳು/ಟ್ರಸ್ಟ್‌ಗಳು, **ಅನುಬಂಧ-ಆ** ರ ಅರ್ಜಿ ನಮೂನೆಯಲ್ಲಿ ನಿಗದಿತ ದಾಖಲೆಯೊಂದಿಗೆ, ಅರ್ಜಿಯನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸಬೇಕು.
   6. ಒಂದು ಸಂಘ ಅಥವಾ ಸಂಸ್ಥೆಯು ಈ ಕಾರ್ಯಕ್ರಮದಡಿ **ಒಂದು ಬಾರಿಗೆ ಮಾತ್ರ ಸಹಾಯಧನ ಪಡೆಯಲು ಅರ್ಹವಾಗಿರುತ್ತದೆ.** ಈ ಉದ್ದೇಶಕ್ಕಾಗಿ ಕೇಂದ್ರ/ರಾಜ್ಯ ಸರ್ಕಾರದ ಇತರೆ ಸರ್ಕಾರಿ ಅಥವಾ ಅರೆ-ಸರ್ಕಾರಿ ಸಂಸ್ಥೆಗಳಿಂದ ಧನಸಹಾಯವನ್ನು ಪಡೆದಿರಬಾರದು.
   7. ಧನಸಹಾಯವನ್ನು ಸಂಬಂಧಿಸಿದ ಸಂಸ್ಥೆಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಮೂಲಕ ಹಣ ಬಿಡುಗಡೆ ಮಾಡಲಾಗುವುದು.
   8. ಖರೀದಿಸಿದ ವಸ್ತುಗಳ ವಿವರಗಳನ್ನು ದಾಸ್ತಾನು ವಹಿಯಲ್ಲಿ ದಾಖಲಿಸಿ, ದೃಢೀಕರಿಸುವುದು.
   9. ಧನಸಹಾಯವನ್ನು ಉಪಯೋಗಿಸಿರುವ ಬಗ್ಗೆ ಸೂಕ್ತ ಲೆಕ್ಕಪತ್ರಗಳನ್ನು ನಿರ್ವಹಿಸಬೇಕು. ಈ ರೀತಿ ಮಾಡುತ್ತಿರುವ ಬಗ್ಗೆ ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರತಿ ಆರು ತಿಂಗಳಿಗೊಮ್ಮೆ ಭೇಟಿ ನೀಡಿ ಪರಿಶೀಲನೆ ಮಾಡತಕ್ಕದ್ದು.
   10. ಪ್ರತಿ ವಿದ್ಯಾರ್ಥಿಗೆ ಕನಿಷ್ಠ 40 ಚ.ಅ. ಸ್ಥಳಾವಕಾಶವಿರತಕ್ಕದ್ದು ಹಾಗೂ ಇದಕ್ಕೆ ಪೂರಕವಾಗಿ ಪ್ರತ್ಯೇಕ ಅಡುಗೆ ಕೋಣೆ, ಊಟದ ಕೋಣೆ ಮತ್ತು ಶೌಚಾಲಯಗಳನ್ನು ಹೊಂದಿರಬೇಕು.

2. **ಇಲಾಖಾ ಅಧಿಕಾರಿಗಳಿಗೆ ಸೂಚನೆಗಳು**

1) ಸರ್ಕಾರದ ಅನುದಾನವನ್ನು ಒಂದು ಬಾರಿಗೆ ರೂ.5.00 ಲಕ್ಷಗಳಂತೆ ಮಂಜೂರು ಮಾಡುವ ಅಧಿಕಾರವನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ನೀಡಲಾಗಿದೆ.

2) ಈ ಕಾರ್ಯಕ್ರಮದಡಿ, ಸರ್ಕಾರದಿಂದ ಬಿಡುಗಡೆಯಾದ ಮೊತ್ತವನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಮಂಜೂರು ಮಾಡಿ, ಸಂಬಂಧಿಸಿದ ಜಿಲ್ಲಾಧಿಕಾರಿಗಳ ಮರು ಬಿಡುಗಡೆ ಮಾಡಬೇಕು..

3). ಈ ಧನಸಹಾಯವನ್ನು ಬಿಡುಗಡೆಯಾಧ ನಂತರ 6 ತಿಂಗಳ ಒಳಗಾಗಿ ಬಳಕೆ ಮಾಡದಿದ್ದಲ್ಲಿ, ಈ ಮೊತ್ತವನ್ನು ಹಾಗೂ ಆ ಮೊತ್ತದ ಮೇಲಿನ ಶೇ.10ರಷ್ಟು ಬಡ್ಡಿಯನ್ನು ಜಿಲ್ಲಾಧಿಕಾರಿಗಳು ಸಂಸ್ಥೆಯಿಂದ ವಸೂಲಿ ಮಾಡತಕ್ಕದ್ದು.

4) ಬಿಡುಗಡೆ ಮಾಡಿದ ಮೊತ್ತವನ್ನು ಯಾವ ಉದ್ದೇಶಕ್ಕಾಗಿ ಉಪಯೋಗಿಸಲಾಗಿದೆ ಎಂಬ ಬಗ್ಗೆ ಪೂರ್ಣ ವಿವರಗಳನ್ನು ಹಾಗೂ ಬಳಕೆ ಪ್ರಮಾಣ ಪತ್ರವನ್ನು ಸಂಸ್ಥೆಯವರು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಮೂಲಕ ಆಯುಕ್ತರಿಗೆ ಸಲ್ಲಿಸಬೇಕು.

5) ಸಂಘ/ಸಂಸ್ಥೆಗಳು ಸಲ್ಲಿಸುವ ಪ್ರಸ್ತಾವನೆಯ ಸಂಬಂಧ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ತಮ್ಮ ಶಿಫಾರಸ್ಸಿನೊಂದಿಗೆ (ಹಾಗೂ ಚೆಕ್‌ಲಿಸ್ಟ್‌ನೊಂದಿಗೆ) ಜಿಲ್ಲಾಧಿಕಾರಿಗಳ ಅನುಮೋದನೆಯೊಂದಿಗೆ ಪ್ರಸ್ತಾವನೆಯನ್ನು ಆಯುಕ್ತರು/ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ಸಲ್ಲಿಸಬೇಕು.

6) ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರ/ಆಯುಕ್ತರು, ಸಹಾಯಧನವನ್ನು ಮಂಜೂರು ಮಾಡಿ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಬೇಕು.

7) ಧನಸಹಾಯವನ್ನು ಮಂಜೂರು ಮಾಡಿದ ಸಂಸ್ಥೆಗೆ ಬಿಡುಗಡೆ ಮಾಡುವ ಮುಂಚೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಸಂಸ್ಥೆಯಿಂದ ಅನುಬಂಧ-ಇ ರಲ್ಲಿರುವಂತಗೆ ಕನಿಷ್ಠ ರೂ.100/- ಛಾಪಾ ಕಾಗದದಲ್ಲಿ ಕರಾರು ಪತ್ರವನ್ನು ಪಡೆಯಬೇಕು.

8) ಮಂಜೂರಾದ ಧನಸಹಾಯವನ್ನು ಸಂಘ-ಸಂಸ್ಥೆಗಳು ಸರಿಯಾದ ಉದ್ದೇಶಕ್ಕೆ ಬಳಸಿಕೊಳ್ಳುತ್ತಿರುವುದನ್ನು ಖಚಿತಪಡಿಸಿಕೊಳ್ಳಲು, ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರತಿ ಆರು ತಿಂಗಳಿಗೊಮ್ಮೆ ಸಂಘ-ಸಂಸ್ಥೆಗೆ ಭೇಟಿ ನೀಡಿ ಪರಿಶೀಲನೆ ಮಾಡಬೇಕು ಮತ್ತು ಈ ಬಗ್ಗೆ ವರದಿಯನ್ನ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ಸಲ್ಲಿಸಬೇಕು.

9) ಸರ್ಕಾರದಿಂದ ಧನಸಹಾಯ ಪಡೆದ ಮೇಲೆ ಸಂಸ್ಥೆಯವರು ವಿದ್ಯಾರ್ಥಿನಿಲಯವನ್ನು ಕನಿಷ್ಠ 5 ವರ್ಷ ನಡೆಸದೇ ಹೋದಲ್ಲಿ ಸರ್ಕಾರದಿಂದ ಪಡೆಯಲಾದ ಪೂರ್ಣ ಧನಸಹಾಯವನ್ನು ವಿದ್ಯಾರ್ಥಿನಿಲಯ ಸ್ಥಗಿತಗೊಂಡ ದಿನಾಂಕದಿಂದ ಶೇ.10ರ ಬಡ್ಡಿ ದರದಲ್ಲಿ ಸರ್ಕಾರಕ್ಕೆ ಹಿಂತಿರುಗಿಸಲು ಬದ್ಧರಾಗಿರಬೇಕು.

(ಆರ್. ಭಾಸ್ಕರ್)
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

**ಅನುಬಂಧ–ಆ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 398 ಬಿಎಂಎಸ್ 2016, ದಿನಾಂಕ: –10–2016 ರಂತೆ**

ಗೆ:

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ

____________________ಜಿಲ್ಲೆ.

**ಹಿಂದುಳಿದ ವರ್ಗಗಳ ಜನಾಂಗದ ಸ್ವಯಂ ಸೇವಾ ಸಂಘ/ಸಂಸ್ಥೆಗಳು ನಿರ್ವಹಣೆ ಮಾಡುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ತಲಾ ರೂ.5.00 ಲಕ್ಷ ಅನುದಾನ ಪಡೆಯಲು ಅರ್ಜಿ**

| | | |
|---|---|---|
| 1 | ಸಂಸ್ಥೆಯ ಪೂರ್ಣ ಹೆಸರು:<br>ವಿಳಾಸ:<br>ದೂರವಾಣಿ ಸಂಖ್ಯೆ: | |
| 2 | ಸಂಸ್ಥೆಯು ಹಿಂದುಳಿದ ವರ್ಗಗಳ ಯಾವ ಪ್ರವರ್ಗ/ಜಾತಿಗೆ ಸೇರಿರುತ್ತದೆ. } ಪ್ರವರ್ಗ:<br>ಜಾತಿ: | |
| 3 | ಸಂಸ್ಥೆಯ ನೋಂದಣಿ } ಆದೇಶ ಸಂಖ್ಯೆ:<br>ದಿನಾಂಕ: | |
| 4 | ಜಿಲ್ಲಾ ನೋಂದಣಾಧಿಕಾರಿಗೆ ಯಾವ ಅವಧಿಯವರೆಗೆ ಲೆಕ್ಕಪತ್ರ ಸಲ್ಲಿಸಲಾಗಿದೆ. | |
| 5 | ಸಂಸ್ಥೆಯ ಕಾರ್ಯಕಾರಿ ಮಂಡಳಿಯ ಅಧ್ಯಕ್ಷರ ಹೆಸರು:<br>…………………………… | |
| 6 | ಸಂಸ್ಥೆಯ ಕಾರ್ಯಕಾರಿ ಮಂಡಳಿಯ ಸದಸ್ಯರ ಪಟ್ಟಿ ಮತ್ತು ವಿಳಾಸದ ವಿವರಗಳನ್ನು ಲಗತ್ತಿಸಿದೆಯೇ? | |
| 7 | ಸಂಸ್ಥೆಯ ಸದಸ್ಯರು ಬೇರೆ ಬೇರೆ ಕುಟುಂಬಳಿಗೆ ಸೇರಿದವರಾಗಿರುತ್ತಾರೆಯೇ ಅಥವಾ ಇಲ್ಲವೇ? | |
| 8 | ಸಂಸ್ಥೆಯು ಬೈಲಾ ಪ್ರತಿಯನ್ನು ಲಗತ್ತಿಸಿದೆಯೇ? | |
| 9 | ಸಂಸ್ಥೆಯು ಈ ಹಿಂದೆ ಈ ಉದ್ದೇಶಕ್ಕಾಗಿ ರಾಜ್ಯ/ಕೇಂದ್ರ ಸರ್ಕಾರ ಅಥವಾ ಅರೆ ಸರ್ಕಾರಿ ಸಂಸ್ಥೆಗಳಿಂದ ಸಹಾಯಧನ ಪಡೆದಿದೆಯೇ? | |
| 10 | ಕಟ್ಟಡ ಸ್ವಂತದ್ದೇ ಅಥವಾ ಲೀಸ್‌ಗೆ ಪಡೆದಿರುವುದೇ? | |
| 11 | ವಿದ್ಯಾರ್ಥಿ ನಿಲಯದ ವಿಳಾಸ: | |
| 12 | ಕಟ್ಟಡವನ್ನು ಲೀಸ್‌ಗೆ ಪಡೆದಿದ್ದಲ್ಲಿ } ಲೀಸ್ ಅವಧಿ:<br>ಲೀಸ್ ಮೇಲೆ ಪಡೆದ ದಿನಾಂಕ:<br>ಯಾರಿಂದ ಪಡೆಯಲಾಗಿದೆ: | |
| 13 | ಸಂಸ್ಥೆಯು ಕಳೆದ 3 ವರ್ಷಗಳ ಲೆಕ್ಕಪತ್ರ/ಆಡಿಟ್ ವರದಿಯನ್ನು ಲಗತ್ತಿಸಲಾಗಿದೆಯೇ? | |

....8

ಸರ್ಕಾರ ಈ ಸಂಬಂಧ ಹೊರಡಿಸಿರುವ ಮಾರ್ಗಸೂಚಿಗಳನ್ನು ತಿಳಿದುಕೊಂಡಿರುತ್ತೇನೆ. ಈ ಮೇಲೆ ನಮೂದಿಸಲಾದ ವಿವರಗಳು ಸತ್ಯವಾಗಿರುತ್ತವೆ. ನಮ್ಮ ಸಂಸ್ಥೆಗೆ ಧನಸಹಾಯವನ್ನು ಮಂಜೂರು ಮಾಡಿದಲ್ಲಿ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು, ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸಲು ಬದ್ಧನಾಗಿರುತ್ತೇನೆ. ಆದ ಕಾರಣ ಈ ಮೇಲಿನ ಉದ್ದೇಶಕ್ಕಾಗಿ ನಮ್ಮ ಸಂಸ್ಥೆಗೆ ರೂ.________________________ಗಳ ಧನಸಹಾಯವನ್ನು ಮಂಜೂರು ಮಾಡಬೇಕೆಂದು ಕೋರುತ್ತೇನೆ.

---

**ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿದ ಈ ಕೆಳಕಂಡ ದಾಖಲೆಗಳನ್ನು ಸಲ್ಲಿಸಿದೆ.**

1. ಸಂಸ್ಥೆಯು ಹಿಂದುಳಿದ ವರ್ಗಗಳ ಯಾವ ಪ್ರವರ್ಗಕ್ಕೆ ಸೇರಿರುತ್ತದೆ ಎಂಬ ಬಗ್ಗೆ ದಾಖಲಾತಿ.
2. ಸಂಸ್ಥೆಯ ನೋಂದಣಿ ಪ್ರಮಾಣ ಪತ.
3. ಜಿಲ್ಲಾ ನೋಂದಣಾಧಿಕಾರಿಗೆ ಹಿಂದಿನ ಸಾಲಿನವರೆಗೆ ಸಲ್ಲಿಸಿರುವ ಲೆಕ್ಕಪತ್ರದ ದೃಢೀಕರಣ ಪತ್ರ.
4. ಸಂಸ್ಥೆಯ ಬೈಲಾ ಪ್ರತಿ.
5. ಸಂಸ್ಥೆಯ ಕಾರ್ಯಕಾರಿ ಮಂಡಳಿಯ ಸದಸ್ಯರ ಪಟ್ಟಿ ಮತ್ತು ವಿಳಾಸ.
6. ಸರ್ಕಾರದಿಂದ ಧನಸಹಾಯ ಪಡೆಯುವ ಬಗ್ಗೆ ಸಂಸ್ಥೆಯ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿದ ನಡವಳಿಗಳು.
7. ಸಂಸ್ಥೆಯ ಹೆಸರಿನಲ್ಲಿ ಸ್ವಂತ ಕಟ್ಟಡ ಹೊಂದಿದ್ದಲ್ಲಿ, ಅದರ ನೋಂದಣಿ ಮತ್ತು ಖಾತಾ ಪ್ರಮಾಣ ಪತ್ರ.
8. ಕಟ್ಟಡವನ್ನು ಲೀಸ್‌ಗೆ ಪಡೆದಿದ್ದಲ್ಲಿ, ಅದರ ಒಪ್ಪಂದದ ಕರಾರು ದೃಢೀಕರಣ ಪ್ರತಿ.
9. ಅರ್ಜಿ ಸಲ್ಲಿಸುವ ದಿನಾಂಕದ ಹಿಂದಿನ ಸಾಲಿನವರೆಗೆ ಕಂದಾಯ ಪಾವತಿಸಿರುವ ಬಗ್ಗೆ ರಶೀದಿ ಪ್ರತಿಗಳು.
10. ಸಂಸ್ಥೆಯ ಆರ್ಥಿಕ ಪರಿಸ್ಥಿತಿ ಕುರಿತಂತೆ ಕಳೆದ 3 ವರ್ಷಗಳ ಲೆಕ್ಕಪತ್ರ/ಆಡಿಟ್ ವರದಿ. (ಚಾರ್ಟೆಡ್ ಅಕೌಂಟೆಂಟ್ ದೃಢೀಕರಿಸಿರಬೇಕು)

---

ದಿನಾಂಕ: ಸಹಿ:

ಸ್ಥಳ: ಅಧ್ಯಕ್ಷರು

---

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ,

________________ಜಿಲ್ಲೆ.

## ಕಛೇರಿ ಉಪಯೋಗಕ್ಕಾಗಿ

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ವರದಿ ಮತ್ತು ಶಿಫಾರಸ್ಸು

ಸಹಿ:
ಜಿಲ್ಲಾ ಹಿಂದುಳಿದ ವರ್ಗಗಳ
ಕಲ್ಯಾಣಾಧಿಕಾರಿ

ಜಿಲ್ಲಾಧಿಕಾರಿಗಳ ಶಿಫಾರಸ್ಸು:

ಸಹಿ:
ದಿನಾಂಕ: ಜಿಲ್ಲಾಧಿಕಾರಿಗಳು

ಕಡತ ಸಂಖ್ಯೆ:

ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಶಿಫಾರಸ್ಸು

ಸಹಿ:

ದಿನಾಂಕ: ಆಯುಕ್ತರು

...11

**ಸರ್ಕಾರದ ಆದೇಶ ಸಂಖ್ಯೆ: ಹಿಂವಕಇ 398 ಬಿಎಂಎಸ್ 2016 ದಿನಾಂಕ: -10-2016ರ**

**ಅನುಬಂಧ-ಇ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

**ಹಿಂದುಳಿದ ವರ್ಗಗಳ ಜನಾಂಗದ ಸ್ವಯಂ ಸೇವಾ ಸಂಘ/ಸಂಸ್ಥೆಗಳು ನಿರ್ವಹಣೆ ಮಾಡುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಒಂದು ಬಾರಿಗೆ ರೂ.5.00 ಲಕ್ಷ ಅನುದಾನ ಪಡೆಯಲು ಸಲ್ಲಿಸಬೇಕಾದ**

**ಪ್ರಮಾಣ ಪತ್ರ**

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ____________ ಜಿಲ್ಲೆ ಇವರಿಗೆ, ಅಧ್ಯಕ್ಷರು/ಕಾರ್ಯದರ್ಶಿಗಳು ______________________________ ____________ (ಸಂಘ/ಸಂಸ್ಥೆಯ ಹೆಸರು ಮತ್ತು ವಿಳಾಸ) ಆದ ನಾವು ____________ ಜಿಲ್ಲೆಯ ________ ತಾಲ್ಲೂಕಿನ ____________ ಗ್ರಾಮದಲ್ಲಿ ಅನುದಾನ ರಹಿತ ಖಾಸಗಿ ವಿದ್ಯಾರ್ಥಿನಿಲಯಕ್ಕೆ ಸರ್ಕಾರದ ಸಹಾಯಧನಕ್ಕಾಗಿ ಅರ್ಜಿ ಅಲ್ಲಿಸಿದ್ದು, ಸರ್ಕಾರ/ಆಯುಕ್ತರು ಈ ಉದ್ದೇಶಕ್ಕಾಗಿ ರೂ.________ ಲಕ್ಷಗಳ ಧನಸಹಾಯವನ್ನು ಆದೇಶ ಸಂಖ್ಯೆ:, ______________________ ದಿನಾಂಕ:____________ರಂತೆ ಮಂಜೂರು ಮಾಡಿರುತ್ತಾರೆ. ಸರ್ಕಾರದ ಆದೇಶದ (ಮಾರ್ಗಸೂಚಿ) ಪ್ರಕಾರ ನಾವು ಈ ಕೆಳಗಿನಂತೆ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇವೆ.

1. ನಮ್ಮ ಸಂಸ್ಥೆಯು ಹಿಂದುಳಿದ ವರ್ಗಗಳ ಪ್ರವರ್ಗ________ರ ________ಜಾತಿಗೆ ಸೇರದ್ದಾಗಿರುತ್ತದೆ.
2. ನಮ್ಮ ಸಂಸ್ಥೆಯ ಕಾರ್ಯಕಾರಿ ಸಮಿತಿಯ ಸದಸ್ಯರು ಬೇರೆ ಬೇರೆ ಕುಟುಂಬಗಳಿಗೆ ಸೇರಿದವರಾಗಿರುತ್ತಾರೆ.
3. ನಮ್ಮ ಸಂಸ್ಥೆಯು ಇದೇ ಮೊದಲ ಬಾರಿಗೆ ಸರ್ಕಾರದಿಂದ ಧನಸಹಾಯವನ್ನು ಪಡೆದಿರುತ್ತದೆ. ಈ ಉದ್ದೇಶಕ್ಕಾಗಿ ಕೇಂದ್ರ/ರಾಜ್ಯ ಸರ್ಕಾರದ ಇತರೆ ಸರ್ಕಾರಿ ಅಥವಾ ಅರೆ ಸರ್ಕಾರಿ ಸಂಸ್ಥೆಗಳಿಂದ ಇದುವರೆಗೆ ಧನಸಹಾಯವನ್ನು ಪಡೆದಿರುವುದಿಲ್ಲ.
4. ಈ ಧನಸಹಾಯವನ್ನು ಬಿಡುಗಡೆಯಾದ ನಂತರ 6 ತಿಂಗಳ ಒಳಗಾಗಿ ಬಳಕೆ ಮಾಡದಿದ್ದಲ್ಲಿ, ಈ ಮೊತ್ತವನ್ನು ಹಾಗೂ ಆ ಮೊತ್ತದ ಮೇಲಿನ ಶೇ.10ರಷ್ಟು ಬಡ್ಡಿಯನ್ನು ಜಿಲ್ಲಾಧಿಕಾರಿಗಳಿಗೆ ಹಿಂತಿರುಗಿಸಲು ಬದ್ಧರಾಗಿರುತ್ತೇವೆ.
5. ಸರ್ಕಾರದಿಂದ ಧನಸಹಾಯವನ್ನು ಪಡೆದ ಮೇಲೆ ವಿದ್ಯಾರ್ಥಿನಿಲಯವನ್ನು ಕನಿಷ್ಠ 5 ವರ್ಷ ನಡೆಸದೇ ಹೋದಲ್ಲಿ ಸರ್ಕಾರದಿಂದ ಪಡೆಯಲಾದ ಪೂರ್ಣ ಧನಸಹಾಯವನ್ನು ವಿದ್ಯಾರ್ಥಿನಿಲಯ ಸ್ಥಗಿತಗೊಂಡ ದಿನಾಂಕದಿಂದ ಶೇ.10ರ ಬಡ್ಡಿ ದರದಲ್ಲಿ ಸರ್ಕಾರಕ್ಕೆ ಹಿಂತಿರುಗಿಸಲು ಬದ್ಧರಾಗಿರುತ್ತೇವೆ.
6. ಈ ಪ್ರಮಾಣ ಪತ್ರದ ಯಾವುದೇ ಷರತ್ತು ಉಲ್ಲಂಘನೆಯಾದಲ್ಲಿ ಕಾನೂನಿನ ರೀತ್ಯಾ ಕ್ರಮ ತೆಗೆದುಕೊಳ್ಳಬಹುದು.
7. ದಿನಾಂಕ:

| | |
|---|---|
| ಸಹಿ: | ಸಹಿ: |
| ಹೆಸರು: | ಹೆಸರು: |
| (ಸಂಸ್ಥೆಯ ಅಧ್ಯಕ್ಷರ) | (ಸಂಸ್ಥೆಯ ಕಾರ್ಯದರ್ಶಿ) |
| (ಮೊಹರಿನೊಂದಿಗೆ) | (ಮೊಹರಿನೊಂದಿಗೆ) |

(ನೋಟರಿಯಿಂದ ಪ್ರಮಾಣೀಕರಿಸಿರಬೇಕು)

..12

**ಹಿಂದುಳಿದ ವರ್ಗಗಳ ಜನಾಂಗದ ಸ್ವಯಂ ಸೇವಾ ಸಂಘ/ಸಂಸ್ಥೆಗಳು ನಿರ್ವಹಣೆ ಮಾಡುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಒಂದು ಬಾರಿಗೆ ರೂ.5.00 ಲಕ್ಷ ಅನುದಾನ ಮಂಜೂರು ಮಾಡುವುದಕ್ಕೆ ಸಂಬಂಧಿಸಿದ ತಡೆಪಟ್ಟಿ**

ಸಂಸ್ಥೆಯ ಹೆಸರು ಮತ್ತು ವಿಳಾಸ:

| ಕ್ರ ಸಂ | ವಿವರಗಳು | ಲಗತ್ತಿಸಲಾಗಿದೆಯೇ? | ವ್ಯವಹಾರದ ಪುಟಸಂಖ್ಯೆ |
|---|---|---|---|
| 1 | ಸಂಸ್ಥೆಯು ಹಿಂದುಳಿದ ವರ್ಗಗಳ ಯಾವ ಪ್ರವರ್ಗಕ್ಕೆ ಸೇರಿರುತ್ತದೆ ಎಂಬ ಬಗ್ಗೆ ದಾಖಲಾತಿ | | |
| 2 | ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸುವುದು | | |
| 3 | ಸಂಸ್ಥೆಯ ನೋಂದಣಿ ಪ್ರಮಾಣ ಪತ್ರ | | |
| 4 | ಜಿಲ್ಲಾ ನೋಂದಣಾಧಿಕಾರಿಗೆ ಹಿಂದಿನ ಸಾಲಿನವರೆಗೆ ಸಲ್ಲಿಸಿರುವ ಲೆಕ್ಕಪತ್ರದ ದೃಢೀಕರಣ ಪತ್ರ | | |
| 5 | ಸಂಸ್ಥೆಯ ಬೈಲಾ ಪ್ರತಿ | | |
| 6 | ಸಂಸ್ಥೆಯ ಕಾರ್ಯಕಾರಿ ಮಂಡಳಿಯ ಸದಸ್ಯರ ಪಟ್ಟಿ ಮತ್ತು ವಿಳಾಸ | | |
| 7 | ಸರ್ಕಾರದಿಂದ ಸಹಾಯಧನ ಪಡೆಯುವ ಬಗ್ಗೆ ಸಂಸ್ಥೆಯ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿದ ನಡವಳಿಗಳು | | |
| 8 | ಸಂಸ್ಥೆಯ ಹೆಸರಿನಲ್ಲಿ ಸ್ವಂತ ಕಟ್ಟಡ ಹೊಂದಿದ್ದಲ್ಲಿ ನೋಂದಣಿ ಮತ್ತು ಖಾತೆ ಪ್ರಮಾಣ ಪತ್ರ | | |
| 9 | ಕಟ್ಟಡವನ್ನು ಲೀಸ್‌ಗೆ ಪಡೆದಿದ್ದಲ್ಲಿ, ಅದರ ಒಪ್ಪಂದದ ಕರಾರು ದೃಢೀಕರಣ ಪ್ರತಿ. | | |
| 10 | ಅರ್ಜಿ ಸಲ್ಲಿಸುವ ದಿನಾಂಕದ ಹಿಂದಿನ ಸಾಲಿನವರೆಗೆ ಕಂದಾಯ ಪಾವತಿಸಿರುವ ಬಗ್ಗೆ ರಶೀದಿ ಪ್ರತಿಗಳು | | |
| 11 | ಸಂಸ್ಥೆಯ ಆರ್ಥಿಕ ಪರಿಸ್ಥಿತಿ ಕುರಿತಂತೆ ಕಳೆದ 3 ವರ್ಷಗಳ ಲೆಕ್ಕಪತ್ರ/ಆಡಿಟ್ ವರದಿ (ಚಾರ್ಟೆಡ್ ಅಕೌಂಟೆಂಟ್ ದೃಢೀಕರಿಸಿರಬೇಕು) | | |
| 12 | ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ ಮತ್ತು ವರ್ಗವಾರು ವಿವರಗಳ ದೃಢೀಕೃತ ಪ್ರತಿ. | | |
| 13 | ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಸ್ಥಳ ತನಿಖಾ ವರದಿ | | |
| 14 | ಅನುದಾನ ಕೋರಲಾದ ಮೊತ್ತ. | | |

*******